# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-152 ಎಸ್.ಜಿ.ಪಾಳ್ಯ ಕಛೇರಿಯಲ್ಲಿ ದಿನಾಂಕ: 19.03.2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು

* * * * * *

ದಿನಾಂಕ-19-03-2022 ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲ್ಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರಮ .ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| ೦೧ | ಶ್ರೀ.ಎಸ್.ಪ್ರಭಾಕರ್, ಪ್ರಧಾನ ಅಭಿಯಂತರರು ಬಿ.ಬಿ.ಎಂ.ಪಿ. | 9480685379 |
| ೦೨ | ಶ್ರೀ.ಸತೀಶ್.ಡಿ ಸ.ಇಂ-152 ವಾರ್ಡ್ | 9480688152 |
| ೦೩ | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 9632222304 |
| ೦೪ | ಶ್ರೀ. ಮಲ್ಲಿಕಾರ್ಜುನ್ ಬಿರಾದರ ಹಿರಿಯ ಆರೋಗ್ಯ ಪರಿವೀಕ್ಷಕರು | 9945042307 |
| ೦೫ | ಶ್ರೀ.ಸುರೇಶ್ ಎ.ಎಸ್.ಐ ಎಸ್.ಜಿ.ಪೋಲಿಸ್ ಠಾಣೆ | 8123010522 |
| ೦೬ | ಶ್ರೀ.ಹೋಲಿಯಪ್ಪ ಮಾರ್ಷಲ್ | 8904349926 |
| ೦೭ | ಶ್ರೀ.ಡಾ|| ಮೊಹಮ್ಮದ್ ಕಮ್ರಾನ್ ಮೆಡಿಕಲ್ ಆಫಿಸರ್ | 9620206422 |
| ೦೮ | ಶ್ರೀ.ಕೃಷ್ಣ.ಸಿ ಕೆಲಸ ಪರಿವೀಕ್ಷಕರು ಬಿ.ಡ.ಬ್ಲೂ.ಎಸ್.ಎಸ್.ಬಿ | 9845768405 |
| ೦೯ | ಶ್ರೀ ಸೈಯದ್ ನಸರುದ್ದೀನ್ ಸದಸ್ಯರು | 9741518897 |
| ೧೦ | ಶ್ರೀ.ಬಿ.ವಿಶ್ವಕುಮಾರ್ ಸದಸ್ಯರು | 9845371963 |
| ೧೧ | ಶ್ರೀ.ಮುನಿಂದ್ರ ಮೇಲ್ವಿಚಾರಕರು ಘ.ತ್ಯಾ.ನಿ | 9901002067 |
| ೧೨ | ಶ್ರೀ ರಮೇಶ್ ಸದಸ್ಯರು | 9731108622 |
| ೧೩ | ಶ್ರೀ.ಗಂಗಾದ್ರೀ ಮೇಲ್ವಿಚಾರಕರು ಘ.ತ್ಯಾ.ನಿ | 9980225272 |
| ೧೪ | ಶ್ರೀ.ಎನ್.ಲೋಕೇಶ್ ಸದಸ್ಯರು | 9448579144 |
| ೧೫ | ಶ್ರೀ.ಬಿ.ಟಿ.ಕೃಷ್ಣಮೂರ್ತಿ ಸದಸ್ಯರು | 9886339044 |
| ೧೬ | ಶ್ರೀಮತಿ.ಸ್ವಾಮಿಗೌಡ ಪರಿವೀಕ್ಷಕರು ತೋಟಗಾರಿಕೆ ಇಲಾಖೆ ದಕ್ಷಿಣ | 9945378526 |
| ೧೭ | ಶ್ರೀ ಮಂಜೂನಾಥ ಪಿ. ಮೇಲ್ವಿಚಾರಕರು ಘ.ತ್ಯಾ.ನಿ | 9740903427 |

1) ಮಾನ್ಯ ನೋಡಲ್ ಅಧಿಕಾರಿಗಳು ಸಭೆಯನ್ನು ಪ್ರಾರಂಭಿಸುತ್ತಾ, ಕಳೆದ ಸಭೆಯಲ್ಲಿ ಪ್ರಸ್ತಾಪಿಸಲಾಗಿದ್ದು, ಸೆಂಟ್ ಜಾನ್ಸ್ ಪಾದಚಾರಿ ಮಾರ್ಗದಲ್ಲಿ ಬೀದಿ ದೀಪ ಹಾಳಾಗಿರುತ್ತದೆ. ಇದರಿಂದ ಕಳ್ಳತನ ಹಾಗೂ ಇತರೆ ಅನೈತಿಕ ಚಟುವಟಿಗಳು ನಡೆಯುವ ಸಂಭವ ಹೆಚ್ಚಾಗಿರುತ್ತದೆ. ಆದುದರಿಂದ ಸದರಿ ರಸ್ತೆ ಬೀದಿದೀಪ ಸರಿಪಡಿಸಬೇಕೆಂದು ತಿಳಿಸಿದ್ದರೂ ಸಹ ಇದುವರೆಗೂ ದುರಸ್ಥಿ ಕಾಮಗಾರಿ ಕೈಗೊಂಡಿರುವುದಿಲ್ಲ ಎಂದು ಸಭೆಗೆ ಮತ್ತೊಮ್ಮೆ ತಿಳಿಸಿದರು. ಈ ಸಂಬಂಧ ಮಾನ್ಯ ಸಭಾಧ್ಯಕ್ಷರು ವಿಳಂಬಕ್ಕೆ ವಿಷಾದ ವ್ಯಕ್ತಪಡಿಸುತ್ತಾ, ಸಭೆಗೆ ಹಾಜರಿದ್ದ ಶ್ರೀ ಗೀರಿಶ್ ಬೀದಿ ದೀಪ ನಿರ್ವಹಣೆ ಗುತ್ತಿಗೆದಾರರನ್ನು ಉದ್ದೇಶಿಸಿ ಮಾತನಾಡಿ ದಿನಾಂಕ 21.03.2022ರ ಒಳಗಾಗಿ ದುರಸ್ಥಿಪಡಿಸಬೇಕೆಂದು ಸೂಚಿಸಿದರು.

2) ಸಭಾಧ್ಯಕ್ಷರು ಮಾತನಾಡಿ, ಮಾರ್ಷಲ್ ರವರಿಗೆ ಮಹಾಮಾರಿ ಕೊರೋನ ರೋಗ ಮೂರನೇ ಅಲೆಯ ಹೊಸ ರುಪಾಂತರಿ ತಳಿ ಓಮಿಕ್ರಾನ್ ರೋಗ ಹರಡದಂತೆ ತಡೆಯಲು ಮುಂಜಾಗ್ರತ ಕ್ರಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಸಮಾರಂಭಗಳು ನಡೆದರೆ ತಪಾಸಣೆ ಮಾಡಿ, ಪರವಾನಿಗೆ ಇಲ್ಲದಿದ್ದರೆ ಪರಿಶೀಲಿಸಿ ಅಂತಹ ಸಮಾರಂಭಗಳನ್ನು ಸ್ಥಗಿತಗೊಳಿಸತಕ್ಕದ್ದು, ಮತ್ತು ಕಡ್ಡಾಯವಾಗಿ ಮಾಸ್ಕ್ ದರಿಸುವುದು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳಲು ಜಾಗೃತಿ ಮೂಡಿಸಬೇಕು ಹಾಗೂ ಮಾಸ್ಕ ದರಿಸದೇ ಇದ್ದವರಿಗೆ ದಂಡ ವಸೂಲಿ ಮಾಡಲು ಸಭೆಯಲ್ಲಿ ಹಾಜರಿದ್ದು ವಾರ್ಡ್ ಸದಸ್ಯರು ರವರಿಗೆ ಸೂಚಿಸಿದರು.

3) ಸಭಾಧ್ಯಕ್ಷರು ಮಾತನಾಡಿ, ಕೋವಿಡ್-19 3ನೇ ಅಲೆಯ ವಿವರ ಹಾಗೂ ನಿರ್ವಹಣೆ ಬಗ್ಗೆ ಪ್ರಸ್ತಾಪಿಸಲಾಗಿ, ಸಭೆಗೆ ಹಾಜರಿದ್ದ ಮೇಡಿಕಲ್ ಆಫಿಸರ್ ಡಾ॥ ಕಮ್ರಾನ್ ಮಾತನಾಡಿ ಹಾಲಿ ವಾಸ್ತುಸ್ಥಿತಿ ಕೋವಿಡ್-3ನೇ ಅಲೆ ಮತ್ತು ರೂಪಾಂತರಿ ತಳಿ ಓಮಿಕ್ರಾನ್ ರೋಗ ನಿಯಂತ್ರಣದಲ್ಲಿದ್ದು, ಪಾಸಿಟಿವ್ ಕೆಸ್‌ಗಳು ಇಳಿಕೆಯಾಗಿರುತ್ತದೆ. ಹೋಮ್ ಐಸೋಲೇಷನ್ ಕೂಡ ನಿಯಂತ್ರಣದಲ್ಲಿರುತ್ತದೆ. ಆದರೂ ರೋಗ ಹರಡದಂತೆ ಮುಂಜಾಗ್ರತೆ ಕ್ರಮಗಳು ಕೈಗೊಳ್ಳಲು ನಮ್ಮ ಜವಾಬ್ದಾರಿಯಾಗಿರುತ್ತದೆ. ಮುಂದೆ ಕೋರೊನಾ ರೂಪಾಂತರಿ ಬೆರೆ ಬೆರೆ ತಳಿಗಳು ಬರುವ ಸಂಭಬವಿದ್ದು, ನಮ್ಮ ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಮುಂಜಾಗ್ರತ ಕ್ರಮಕೈಗೊಳ್ಳಲು ಸಿದ್ಧವಿರುವದಾಗಿ ಸಭೆಗೆ ತಿಳಿಸಿದರು ಮತ್ತು 16-18ನೆ ವಯಸ್ಸುಳ್ಳ ಯುವಜನರಿಗೆ ಶೇ 70% ಕೋರನಾ ಲಸೀಕೆಯನ್ನು ನೀಡಲಾಗಿರುತ್ತದೆ ಹಾಗೂ ಕೋರನಾ ವಾರಿಯರ್ಸ್ ಹಾಗೂ 60ವರ್ಷ ಮೆಲ್ಪಟ್ಟ ಹಿರಿಯರಿಗೆ ಬೂಸ್ಟರ್ ಡೋಸ್ ಲಸಿಕೆ ನೀಡುವ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಈ ಬಗ್ಗೆ ಸದುಪಯೋಗಪಡೆದುಕೊಳ್ಳಲು ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರಿಗೆ ತಿಳಿಸಿದರು.

4) ಶ್ರೀ.ಲೋಕೆಶ್.ಎನ್ ರವರು ಮಾತನಾಡಿ ಚಿಕ್ಕಾಡುಗೋಡಿ ಪ್ರದೇಶದಲ್ಲಿ ಸೈಕಲ್ ಕಳ್ಳತನವಾಗಿರುವ ಪ್ರಕರಣಗಳು ಹೆಚ್ಚಾಗಿ ಕಂಡುಬಂದಿರುತ್ತದೆ. ಈ ಬಗ್ಗೆ ಮಡಿವಾಳ ಪೊಲೀಸ್ ಠಾಣೆಯವರಿಗೆ ಹಲವಾರು ಬಾರಿ ದೂರು ನೀಡಿದ್ದರೂ ಸಹ ಯಾವುದೇ ಕ್ರಮಗಳು ಜರುಗಿಸದಿರುವುದು ಕಂಡುಬಂದಿರುತ್ತದೆ ಹಾಗೂ ರಾತ್ರಿ 11:00 ಗಂಟೆ ಮತ್ತು 03.00 ಗಂಟೆ ಸಮಯದಲ್ಲಿ ಈ ಪ್ರದೇಶಕ್ಕೆ ಗಸ್ತುಮಾಡುವುದು ಸೂಕ್ತವಿರುತ್ತದೆ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ಸಭಾಧ್ಯಕ್ಷರು ಮಾತನಾಡಿ ಸಭೆಗೆ ಹಾಜರಿದ್ದ ಪೊಲೀಸ್ ಅಧಿಕಾರಿರವರಿಗೆ ಈ ಬಗ್ಗೆ ಕ್ರಮ ಕೈಗೊಳ್ಳಲು ಸೂಚಿಸಿದರು.

5) ಶ್ರೀ.ಅಜಯ್ ಕಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ, ಚಿಕ್ಕಾಡುಗೋಡಿಯಲ್ಲಿರುವ ಹಿಂದೂ ರುದ್ರಭೂಮಿ ಆವರಣದಲ್ಲಿ ಬೀದಿ ದೀಪಗಳು ಹಾಳಾಗಿರುತ್ತವೆ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ಸಭಾಧ್ಯಕ್ಷರು ಮಾತನಾಡಿ ಸಭೆಗೆ ಹಾಜರಿದ್ದ ಶ್ರೀ ಗಿರೀಶ್ ಬೀದಿ ದೀಪ ನಿರ್ವಹಣೆ ಗುತ್ತಿಗೆದಾರರನ್ನು ಉದ್ದೇಶಿಸಿ ಮಾತನಾಡಿ ಕೂಡಲೇ ದುರಸ್ಥಿಪಡಿಸಬೇಕೆಂದು ಸೂಚಿಸಿದರು.

6) ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಪ್ರಸ್ತಾಪಿಸಲಾಗಿ, ಶ್ರೀ ಅಜಯ್ ಕಿರಿಯ ಆರೋಗ್ಯ ಪರಿವೀಕ್ಷರು ಮಾತನಾಡಿ ವಾರ್ಡ್ ಪ್ರದೇಶದಲ್ಲಿ ಒಣತ್ಯಾಜ್ಯ ಮತ್ತು ಹಸಿ ತ್ಯಾಜ್ಯ ಸಮರ್ಪಕವಾಗಿ ಸಂಗ್ರಹಿಸಿ ವಿಲೇವಾರಿ ಮಾಡಲಾಗುತ್ತಿರುತ್ತದೆ ಮತ್ತು ಬ್ಲಾಕ್ ಸ್ಪಾಟ್‌ಗಳ ಸಂಖ್ಯೆಗಳು ಆದಷ್ಟು ಕಡಿತಗೊಳಿಸಲು ಶ್ರಮವಹಿಸಲಾಗುತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಸಭೆ ಅಧ್ಯಕ್ಷರು ಮಾತನಾಡಿ, ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

S. Prabhakar

(ಶ್ರೀ. ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

(ಶ್ರೀ. ಎಸ್.ಪ್ರಭಾಕರ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

ಪ್ರತಿಯನ್ನು:
1. ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ-ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.